ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಗಾಗಿ ಕರೆಯಲಾದ ಟೆಂಡರ್ ಕುರಿತು

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-

1532 (1867) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019-20ನೇ ಸಾಲಿನಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ವಿವಿಧ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಗಾಗಿ ಎಷ್ಟು ಮೊತ್ತದ ಟೆಂಡರ್ ಕರೆಯಲಾಗಿದೆ; (ಕೈಗಾರಿಕಾ ಪ್ರದೇಶವಾರು ವಿವರ ನೀಡುವುದು)

(ಆ) ಸದರಿ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗಿಯಾದ ಬಿಡ್‌ದಾರರು, ಟೆಂಡರ್ ಪಡೆದ ಗುತ್ತಿಗೆದಾರರ ಪೂರ್ಣ ವಿವರಗಳನ್ನು ಒದಗಿಸುವುದು;

(ಇ) ಟೆಂಡರ್ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸದೆ, ಅವ್ಯವಹಾರಗಳು ನಡೆದಿರುವ ಬಗ್ಗೆ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಟೆಂಡರ್ ಅರ್ಜಿ ಸಲ್ಲಿಕೆ ನಂತರ ಫೈನಾನ್ಷಿಯಲ್ ಬಿಡ್‌ನಲ್ಲಿ ಅನೇಕ ಲೋಪದೋಷಗಳಿದ್ದು, ನಿರ್ಧಿಷ್ಠ ವ್ಯಕ್ತಿಗೆ ಅನುಕೂಲ ಮಾಡಿಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? (ವಲಯವಾರು, ಅಧಿಕಾರಿವಾರು ಪೂರ್ಣ ವಿವರ ನೀಡುವುದು)